# All India Radio: Bangalore
# Regional Bulletin In Kannada
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

08.09.2026 6.40 p.m.

<><><><>

ಮುಖ್ಯಾಂಶಗಳು

- ಎಲ್ ನಿನೋ ಹಿನ್ನೆಲೆ: ರಾಜ್ಯದಲ್ಲಿ ಭತ್ತ, ರಾಗಿ, ಜೋಳ, ದ್ವಿದಳ ಧಾನ್ಯಗಳ ಬಿತ್ತನೆ ಪ್ರದೇಶ ಇಳಿಮುಖ
- ಆನ್‌ಲೈನ್ ಡೆಲಿವರಿ ಕಂಪನಿಗಳಿಂದ ಆಹಾರ ಉತ್ಪನ್ನ ಖರೀದಿ ವೇಳೆ ಎಚ್ಚರಿಕೆ ವಹಿಸುವಂತೆ ಗ್ರಾಹಕರಿಗೆ ಆರೋಗ್ಯ ಸಚಿವ ಯು.ಟಿ.ಖಾದರ್ ಸಲಹೆ
- ತಮಿಳುನಾಡಿಗೆ ನಿತ್ಯ ಆರು ಸಾವಿರ ಕ್ಯೂಸೆಕ್ ನೀರು ಹರಿಸಲು ಆದೇಶ: ಸಿಡಬ್ಲ್ಯುಆರ್‌ಸಿ ವಿರುದ್ಧ ಸಚಿವ ಚಲುವರಾಯಸ್ವಾಮಿ ಅಸಮಾಧಾನ
- ರಾಜ್ಯದಲ್ಲಿ ಬ್ಯಾಹ್ಯಾಕಾಶ ತಂತ್ರಜ್ಞಾನ ಅಭಿವೃದ್ಧಿಗೆ ಸಂಪೂರ್ಣ ಸಹಕಾರ- ಸಚಿವ ಡಾ.ಅಜಯ್ ಧರಂ ಸಿಂಗ್
- ಕರ್ನಾಟಕದೊಂದಿಗೆ ಸಾಂಸ್ಕೃತಿ ಉತ್ಪಾದನೆ ಮತ್ತು ಎಐ ಸಾರಿಗೆ ಕ್ಷೇತ್ರದಲ್ಲಿ ಸಹಕಾರಕ್ಕೆ ಇಟಲಿ ಆಸಕ್ತಿ

<><><><>

ದೇಶಾದ್ಯಂತ ಮುಂಗಾರು ಬೆಳೆಗಳ ಬಿತ್ತನೆ ಪ್ರದೇಶ ಒಂದು ಸಾವಿರದ ೮೭ ಲಕ್ಷ ಹೆಕ್ಟೇರ್ ದಾಟಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ದತ್ತಾಂಶದಲ್ಲಿ ತಿಳಿಸಿದೆ. ಆದರೆ, ಎಲ್ ನಿನೋ ಹವಾಮಾನ ಮಾದರಿಯ ಪ್ರತಿಕೂಲ ಪರಿಣಾಮದಿಂದಾಗಿ ಕರ್ನಾಟಕದಲ್ಲಿ ಪ್ರಮುಖವಾಗಿ ಭತ್ತ ಪ್ರದೇಶದ ವ್ಯಾಪ್ತಿ ಗಣನೀಯವಾಗಿ ಕುಸಿತ ಕಂಡಿದೆ. ಇದೇ ವೇಳೆ ಉದ್ದು ಮತ್ತು ಹೆಸರುಕಾಳುಗಳಂತಹ ದ್ವಿದಳ ಧಾನ್ಯಗಳ ಕೃಷಿ ಪ್ರದೇಶದ ವ್ಯಾಪ್ತಿಯಲ್ಲೂ ಇಳಿಕೆಯಾಗಿದೆ. ಜೋಳ, ರಾಗಿ ಬಿತ್ತನೆ ಪ್ರದೇಶವೂ ಕುಸಿತ ಕಂಡಿದೆ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

<><><><>

ಆನ್‌ಲೈನ್ ಡೆಲಿವರಿ ಕಂಪನಿಗಳಿಂದ ಆಹಾರ ಉತ್ಪನ್ನ ಖರೀದಿ ವೇಳೆ ಎಚ್ಚರಿಕೆ ವಹಿಸುವಂತೆ ಗ್ರಾಹಕರಿಗೆ ಆರೋಗ್ಯ ಸಚಿವ ಯು.ಟಿ.ಖಾದರ್ ಸಲಹೆ ನೀಡಿದ್ದಾರೆ. ಆಹಾರ ಮತ್ತು ಔಷಧಿಗಳನ್ನು ಖರೀದಿಸುವ ಮೊದಲು ಮುಕ್ತಾಯ ದಿನಾಂಕವನ್ನು ಪರಿಶೀಲಿಸುವಂತೆ ತಿಳಿಸಿದ್ದಾರೆ. ಈವರೆಗೆ ೩ ಕೋಟಿ ರೂಪಾಯಿ ಮೌಲ್ಯದ ಆಹಾರ ಮತ್ತು ಔಷಧಿಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಈ ನಡುವೆ ಇಂದು ಕರ್ನಾಟಕ ಆಹಾರ ಸುರಕ್ಷತೆ ಮತ್ತು ಔಷಧ ಮಂಡಳಿ, ಬೆಂಗಳೂರಿನ ಆಹಾರ ಸಂಗ್ರಹಣೆ ಮತ್ತು ಸರಬರಾಜು ಘಟಕಗಳಲ್ಲಿ ದಾಳಿ ನಡೆಸಿ ಸುಮಾರು ೧

ಕೋಟಿ ೪೦ ಲಕ್ಷ ರೂಪಾಯಿ ಅಧಿಕ ಮೌಲ್ಯದ ಅವಧಿ ಮೀರಿದ ಹಾಗೂ ತಪ್ಪಾಗಿ ಬ್ರ್ಯಾಂಡ್ ಮಾಡಲಾದ ಆಹಾರ ಉತ್ಪನ್ನಗಳು ಹಾಗೂ ಔಷಧಿಗಳನ್ನು ವಶಪಡಿಸಿಕೊಂಡಿದೆ.

<><><>

ತಮಿಳುನಾಡಿಗೆ ನಿತ್ಯ ೬ ಸಾವಿರ ಕ್ಯೂಸೆಕ್ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣಾ ಸಮಿತಿ ನೀಡಿರುವ ಆದೇಶದ ಬಗ್ಗೆ ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಕಷ್ಟದ ಸ್ಥಿತಿಯಲ್ಲಿ ಆರು ಸಾವಿರ ಕ್ಯೂಸೆಕ್ ನೀರು ಹರಿಸುವುದು ಅಸಾಧ್ಯ ಎಂದು ಹೇಳಿದ್ದಾರೆ. ದೆಹಲಿಯಲ್ಲಿ ಕುಳಿತು ಆದೇಶ ನೀಡುವ ಪ್ರಾಧಿಕಾರಗಳ ಕಾರ್ಯವೈಖರಿಯನ್ನು ಅವರು ತರಾಟೆಗೆ ತೆಗೆದುಕೊಂಡಿದ್ದಾರೆ. ನಾಳೆಯೇ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಲು ಚಿಂತನೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ.

<><><>

ಇಸ್ರೋ ಸಾಧನೆ ದೇಶದ ಹೆಮ್ಮೆಯಾಗಿದ್ದು, ರಾಜ್ಯದಲ್ಲಿ ಬಾಹ್ಯಾಕಾಶ ತಂತ್ರಜ್ಞಾನ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಅಜಯ್ ಧರಂ ಸಿಂಗ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಜಿಎಸ್‌ಎಲ್‌ವಿ-ಎಫ್ -೧೬, ಇಒಎಸ್-೦೫ ಉಡಾವಣೆ ಹಿನ್ನೆಲೆಯಲ್ಲಿ ಇಂದು ಇಸ್ರೋ ಅಧ್ಯಕ್ಷ ಹಾಗೂ ಬಾಹ್ಯಾಕಾಶ ಇಲಾಖೆಯ ಕಾರ್ಯದರ್ಶಿ ಡಾ.ವಿ.ನಾರಾಯಣನ್ ಅವರನ್ನು ಸಚಿವರು ಅಭಿನಂದಿಸಿದರು. ಇದೇ ವೇಳೆ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ದೂರವಾಣಿ ಮೂಲಕ ಇಸ್ರೋ ಅಧ್ಯಕ್ಷರನ್ನು ಹಾಗೂ ಇಡೀ ತಂಡದ ಸಾಧನೆಗೆ ಶ್ಲಾಘನೆ ವ್ಯಕ್ತಪಡಿಸಿದರು. ಇಸ್ರೋ ಮತ್ತು ಕರ್ನಾಟಕ ಸರ್ಕಾರದ ನಡುವಿನ ವಿಜ್ಞಾನ ಮತ್ತು ತಂತ್ರಜ್ಞಾನ ಸಹಕಾರವನ್ನು ಇನ್ನಷ್ಟು ಬಲಪಡಿಸುವ ಅಗತ್ಯವಿದೆ ಎಂದು ತಿಳಿಸಿದ್ದಾರೆ.

<><><>

ಭಾರತ ಮತ್ತು ನೇಪಾಳಕ್ಕೆ ಇಟಲಿಯ ರಾಯಭಾರಿಯಾಗಿರುವ ಆಂಟೋನಿಯೊ ಬಾರ್ತೋಲಿ ಹಾಗೂ ಬೆಂಗಳೂರಿನ ಇಟಲಿ ಕಾನ್ಸುಲ್ ಜನರಲ್ ಜಿಯಾಂಡೊಮೆನಿಕೊ ಮಿಲಾನೊ ಇಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರನ್ನು ಭೇಟಿಯಾಗಿ ಸಮಾಲೋಚನೆ ನಡೆಸಿದರು. ಈ ವೇಳೆ, ಬೆಂಗಳೂರಿನ ಹೊರಭಾಗದಲ್ಲಿ ಕೃಷಿ ಆಹಾರ ಮತ್ತು ತ್ಯಾಜ್ಯದಿಂದ ಇಂಧನ ತಯಾರಿಸುವ ಉತ್ಪಾದನಾ ಘಟಕಗಳನ್ನು ಸ್ಥಾಪಿಸುವುದು, ಸಮಗ್ರ ಮತ್ತು ಸಮರ್ಥ ನಗರ ಸಂಚಾರ ನಿರ್ವಹಣೆಗಾಗಿ ಕೃತಕಬುದ್ಧಿಮತ್ತೆ ತಂತ್ರಜ್ಞಾನದಲ್ಲಿ ಪರಿಣತಿ ಹೊಂದಿರುವ ಇಟಲಿಯ ಕಂಪನಿಗಳ ಸೇವೆಗಳನ್ನು ಸಾರಿಗೆ ಕ್ಷೇತ್ರದಲ್ಲಿ ಬಳಸಿಕೊಳ್ಳುವಂತೆ ಪ್ರಸ್ತಾಪಿಸಿದ್ದಾರೆ.

<><><>

ರಾಜ್ಯದ ನಗರಗಳಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಹಾಗೂ ಭವಿಷ್ಯದ ನಗರೀಕರಣಕ್ಕೆ ತಕ್ಕಂತೆ ಸಮಗ್ರ ಸಾರಿಗೆ ವ್ಯವಸ್ಥೆ ರೂಪಿಸುವ ನಿಟ್ಟಿನಲ್ಲಿ ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಬೆಂಗಳೂರಿನಲ್ಲಿಂದು ನಗರ ಭೂಸಾರಿಗೆ

ನಿರ್ದೇಶನಾಲಯದ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಸಭೆಯಲ್ಲಿ ಸುಗಮ ಜನಸಂಚಾರ, ವೇಗದ ಸುರಕ್ಷಿತ ಹಾಗೂ ಪರಿಸರ ಸ್ನೇಹಿ ನವೀನ ಸಾರಿಗೆ ವ್ಯವಸ್ಥೆಗಳನ್ನು ಅಳವಡಿಸುವ ಕುರಿತು ಚರ್ಚಿಸಲಾಯಿತು. ಮೆಟ್ರೋ, ಬಸ್, ರೈಲು ಸೇರಿದಂತೆ ವಿವಿಧ ಸಾರ್ವಜನಿಕ ಸಾರಿಗೆ ವ್ಯವಸ್ಥೆಗಳ ಮೇಲೆ ಉತ್ತಮ ಸಮನ್ವಯ ಮತ್ತು ಸಂಪರ್ಕ ಕಲ್ಪಿಸುವ ಕುರಿತಂತೆ ಸಭೆಯಲ್ಲಿ ಚರ್ಚಿಸಲಾಯಿತು. ಬಳಿಕ ಅವರು, ಮೈಸೂರಿನಲ್ಲಿ ಸಾರ್ವಜನಿಕ ಖಾಸಗಿ ಪಾಲುದಾರಿಕೆ ಮಾದರಿಯಲ್ಲಿ ನಿರ್ಮಿಸಲು ಉದ್ದೇಶಿಸಿರುವ ಅಂತಾರಾಷ್ಟ್ರೀಯ ದರ್ಜೆಯ ಚಿತ್ರನಗರಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

<><><>

ರಾಜ್ಯ ಪ್ರವಾಸೋದ್ಯಮ ಇಲಾಖೆ ಇದೇ ಮೊದಲ ಬಾರಿಗೆ ಪ್ರವಾಸೋದ್ಯಮ ಕ್ಷೇತ್ರದ ವಿವಿಧ ವಿಭಾಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡುತ್ತಿರುವ ಸಂಸ್ಥೆಗಳು, ಉದ್ಯಮಿಗಳು ಹಾಗೂ ವ್ಯಕ್ತಿಗಳನ್ನು ಗುರುತಿಸಲು ಕರ್ನಾಟಕ ಟೂರಿಸಂ ಅವಾರ್ಡ್ಸ್-೨೦೨೬ ಆಯೋಜಿಸಲಾಗುತ್ತಿದೆ ಎಂದು ಪ್ರವಾಸೋದ್ಯಮ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ. ಇದೇ ೧೭ರವರೆಗೆ ನಾಮನಿರ್ದೇಶನಕ್ಕೆ ಅರ್ಜಿ ಸಲ್ಲಿಸಬಹುದು. ಇದೇ ೨೭ ರಂದು ಪ್ರಶಸ್ತಿ ಪ್ರದಾನ ಸಮಾರಂಭ ಬೆಂಗಳೂರಿನಲ್ಲಿ ನಡೆಯಲಿದೆ. ಪ್ರಶಸ್ತಿಗಳ ಆಯ್ಕೆಗೆ ಉದ್ಯಮ ಕ್ಷೇತ್ರದ ಹಿರಿಯರು, ವಿಷಯ ತಜ್ಞರು ಹಾಗೂ ಸಂಬಂಧಿತ ಪ್ರತಿನಿಧಿಗಳನ್ನು ಒಳಗೊಂಡ ಸ್ವತಂತ್ರ ಸ್ಕ್ರೀನಿಂಗ್ ಸಮಿತಿ ಕಾರ್ಯ ನಿರ್ವಹಿಸಲಿದೆ.

<><><>

ಬೆಂಗಳೂರು ನಗರದಲ್ಲಿ ರಸ್ತೆ ಸುರಕ್ಷತೆ ಹೆಚ್ಚಿಸುವುದು ಹಾಗೂ ವಾಹನ ಸಂಚಾರ ಸುಗಮಗೊಳಿಸುವ ಉದ್ದೇಶದಿಂದ ಐದು ಪ್ರಮುಖ ಫ್ಲೈಓವರ್‌ಗಳು ಹಾಗೂ ಎಲಿವೇಟೆಡ್ ಕಾರಿಡಾರ್‌ಗಳಲ್ಲಿ ವಿವಿಧ ವರ್ಗದ ವಾಹನಗಳ ಸಂಚಾರಕ್ಕೆ ವಿಧಿಸಲಾಗಿರುವ ನಿರ್ಬಂಧಗಳನ್ನು ಹಂತ ಹಂತವಾಗಿ ಜಾರಿಗೊಳಿಸಲು ಬೆಂಗಳೂರು ಸಂಚಾರ ಪೊಲೀಸರು ನಿರ್ಧರಿಸಿದ್ದಾರೆ. ಈ ಕುರಿತಂತೆ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಸಂಚಾರ ನಿರ್ಬಂಧಗಳನ್ನು ಜಾರಿಗೊಳಿಸಿದ ಬಳಿಕ ಬಿಜಿಎಸ್ ಫ್ಲೈಓವರ್, ಪೀಣ್ಯ ಫ್ಲೈಓವರ್ ಮತ್ತು ಡಬಲ್ ಡೆಕ್ಕರ್ ಫ್ಲೈಓವರ್‌ಗಳಲ್ಲಿ ಸಂಚಾರವು ಸುಗಮವಾಗಿ ಮತ್ತು ಪರಿಣಾಮಕಾರಿಯಾಗಿ ನಡೆಯುತ್ತಿರುವುದು ಕಂಡುಬಂದಿದೆ ಎಂದು ತಿಳಿಸಿದ್ದಾರೆ. ಮೊದಲ ಹಂತದಲ್ಲಿ ಸರಕು ವಾಹನಗಳಿಗೆ ನಿರ್ಬಂಧ ಮುಂದುವರಿಯಲಿದೆ. ಇದೇ ೧೧ ರಿಂದ ಎಲೆಕ್ಟ್ರಾನಿಕ್ ಸಿಟಿ, ಎಲಿವೇಟೆಡ್ ಕಾರಿಡಾರ್‌ನಲ್ಲೂ ಹಂತ ಹಂತವಾಗಿ ನಿರ್ಬಂಧ ಜಾರಿಗೊಳಿಸಲಾಗುವುದು ಎಂದು ಹೇಳಿದ್ದಾರೆ.

<><><>

ಪರಪ್ಪನ ಅಗ್ರಹಾರ ಕಾರಾಗೃಹದಲ್ಲಿ ಮೊಬೈಲ್ ಫೋನ್ ಬಳಸಿದ ಆರೋಪಕ್ಕೆ ಸಂಬಂಧಿಸಿದಂತೆ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ವಿಚಾರಣೆಗೆ ಒಳಪಡಿಸಲು ಪೊಲೀಸರು

ನಿರ್ಧರಿಸಿದ್ದಾರೆ. ಇಂದು ಅವರನ್ನು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಗಿದೆ. ಈ ಪ್ರಕರಣದಲ್ಲಿ ಸೆಲ್ ಹಂಚಿಕೊಳ್ಳುತ್ತಿದ್ದ ಪ್ರತಾಪ್ ಮೊದಲನೇ ಆರೋಪಿಯಾದರೆ, ಪ್ರಜ್ವಲ್ ರೇವಣ್ಣ ಎರಡನೇ ಆರೋಪಿ ಎಂದು ಪರಿಗಣಿಸಲಾಗಿದೆ.

<><><>

ಕೆಪಿಎಸ್‌ಸಿ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಅಮಾನತುಗೊಂಡಿರುವ ಅಧ್ಯಕ್ಷ ಸಾಹುಕಾರ್ ಶಿವಶಂಕರಪ್ಪ ಅವರಿಗೆ ಸಿಐಡಿ ಮೂರನೇ ನೋಟಿಸ್ ಜಾರಿ ಮಾಡಿದೆ. ಪದೇ ಪದೇ ಸಮನ್ಸ್ ಜಾರಿ ಮಾಡಿದರೂ ವಿಚಾರಣೆಗೆ ಹಾಜರಾಗದ ಹಿನ್ನೆಲೆಯಲ್ಲಿ ಅವರನ್ನು ಬಂಧಿಸಲು ಪೊಲೀಸರು ಸಿದ್ಧತೆ ನಡೆಸುತ್ತಿದ್ದಾರೆ ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ಬೆಂಗಳೂರಿನ ಡಾಲರ್ಸ್ ಕಾಲೋನಿಯಲ್ಲಿರುವ ಅವರ ನಿವಾಸದಲ್ಲಿ ಸಿಐಡಿ ಅಧಿಕಾರಿಗಳು ಶೋಧ ಮುಂದುವರಿಸಿದ್ದಾರೆ.

<><><>

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರದ ಸಫಾರಿ ವಾಹನಗಳಿಗೆ ಜಿಪಿಎಸ್ ಹಾಗೂ ಡ್ಯಾಶ್ ಕ್ಯಾಮ್‌ಗಳನ್ನು ಅಳವಡಿಕೆ ಮಾಡಿ ವಾಹನಗಳ ಸಂಚಾರದ ಮೇಲೆ ಅರಣ್ಯ ಇಲಾಖೆ ನಿರಂತರ ನಿಗಾ ವಹಿಸಿದೆ. ಸಫಾರಿ ವಾಹನಗಳ ಸಂಚಾರದ ಮೇಲೆ ನಿಗಾವಹಿಸುವ ಜೊತೆಗೆ ವನ್ಯಜೀವಿಗಳ ಚಲನವಲನದ ಮೇಲೆ ಹೆಚ್ಚಿನ ಗಮನಹರಿಸಲು ಸಫಾರಿ ವಾಹನಗಳಿಗೆ ಜಿಪಿಎಸ್ ಹಾಗೂ ಡ್ಯಾಶ್ ಕ್ಯಾಮ್‌ಗಳನ್ನು ಅಳವಡಿಕೆ ಮಾಡಲಾಗಿದೆ. ವಾಹನಗಳು ಸಂಚರಿಸುವ ಮಾರ್ಗ, ವೇಗ ಸೇರಿದಂತೆ ವಿವಿಧ ಮಾಹಿತಿಯನ್ನು ಜಿಪಿಎಸ್ ಮೂಲಕ ಮೇಲ್ವಿಚಾರಣೆ ನಡೆಸಲಾಗುತ್ತಿದೆ. ವನ್ಯಜೀವಿಗಳ ಸುರಕ್ಷತೆ ಹಾಗೂ ಪ್ರವಾಸಿಗರ ಹಿತದೃಷ್ಟಿಯಿಂದ ಜಿಪಿಎಸ್ ಅಳವಡಿಸಲಾಗಿದೆ ಎಂದು ಗೋಪಾಲಸ್ವಾಮಿ ಬೆಟ್ಟ ವನ್ಯಜೀವಿ ವಲಯ ಅರಣ್ಯಾಧಿಕಾರಿ ಮಾಹಿತಿ ನೀಡಿದ್ದಾರೆ.

<><><>

ಇನ್ನು ಸಂಕ್ಷಿಪ್ತ ಸುದ್ದಿಗಳು..

೧. ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬಳ್ಳಾರಿ ಜಿಲ್ಲೆಯಲ್ಲಿ ಐದು ವರ್ಷಗಳ ಹಿಂದೆ ಇ-ಕೆವೈಸಿ ಮಾಡಿಸಿದ್ದ ಪಡಿತರ ಚೀಟಿದಾರರಿಗೆ ಈ ತಿಂಗಳ ಅಂತ್ಯದೊಳಗೆ ಮರು ಇ-ಕೆವೈಸಿ ದೃಡೀಕರಿಸಿಕೊಳ್ಳುವಂತೆ ಸೂಚಿಸಿದೆ.

೨. ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಬೀದಿ ದೀಪಗಳ ಕಾರ್ಯನಿರ್ವಹಣೆಯನ್ನು ಪರಿಶೀಲಿಸಿ, ದೋಷ ಕಂಡುಬಂದ ಕೂಡಲೇ ದುರಸ್ತಿ ಕೈಗೊಳ್ಳಬೇಕು ಎಂದು ಕೇಂದ್ರ ನಗರ ಪಾಲಿಕೆ ಆಯುಕ್ತ ಜಗದೀಶ್.ಜಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>